**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಸಹಕಾರ ಸಂಘಗಳ ಹಾಗೂ ಸೌಹಾರ್ದ ಸಹಕಾರಿಗಳ 2020-21ರ ಲೆಕ್ಕಪರಿಶೋಧನಾ ವರದಿಯನ್ನು ಸಲ್ಲಿಸಲು ಕಾಲಾವಧಿಯನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಮತ್ತು ತಿದ್ದುಪಡಿ ಆದೇಶದ ಸಂಖ್ಯೆ: ಸಿಒ 60 ಸಿಎಲ್ಎಮ್ 2021, ದಿನಾಂಕ :04.08.2021 ಮತ್ತು 05.08.2021.
2. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರ ಪತ್ರ ಸಂಖ್ಯೆ:ಲೆಪಶಾ/ಇತರೆ/ಸಸಂಲೆಪನಿಅವಿ/02/2021-22, ದಿನಾಂಕ:15.07.2021.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶಗಳಲ್ಲಿ ಸಹಕಾರ ಸಂಘಗಳ ಹಾಗೂ ಸೌಹಾರ್ದ ಸಹಕಾರಿಗಳ 2020-21ರ ವಾರ್ಷಿಕ ಸಾಮಾನ್ಯ ಸಭೆಗಳನ್ನು ಡಿಸೆಂಬರ್ 25, 2021ರವರೆಗೆ ವಿಸ್ತರಿಸಿ ಮತ್ತು Video Conference / Virtual Meeting ಮೂಲಕ ನಡೆಸಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ(2)ರ ಪತ್ರದಲ್ಲಿ ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿದ್ದ ಕಾರಣ ಎಲ್ಲಾ ಸಹಕಾರ ಸಂಘ/ಸೌಹಾರ್ದ ಸಹಕಾರಿಗಳನ್ನು ಸಕಾಲದಲ್ಲಿ ಲೆಕ್ಕಪರಿಶೋಧನೆ ನಿರ್ವಹಿಸಲು ಕಷ್ಟಸಾಧ್ಯವಾಗಿರುತ್ತದೆ. ಆದಕಾರಣ ಸಹಕಾರ ಸಂಘಗಳು/ಸೌಹಾರ್ದ ಸಹಕಾರಿಗಳ 2020-21ನೇ ಸಾಲಿನ ಲೆಕ್ಕಪರಿಶೋಧನಾ ಕಾರ್ಯ ಮಾಡುವುದನ್ನು 4 ತಿಂಗಳವರೆಗೆ ಅಂದರೆ 1ನೇ ಸೆಪ್ಟೆಂಬರ್ 2021 ರಿಂದ 31ನೇ ಡಿಸೆಂಬರ್ 2021ರವರೆಗೆ ವಿಸ್ತರಿಸಿ ಅನುಮತಿ ನೀಡುವಂತೆ ಅಧ್ಯಕ್ಷರು, ಕರ್ನಾಟಕ ಸ್ಟೇಟ್ ಚಾರ್ಟರ್ಡ್ ಅಕೌಂಟೆಂಟ್ಸ್ ಅಸೋಸಿಯೇಷನ್‌ರವರು ವಿನಂತಿಸಿಕೊಂಡಿರುವುದಾಗಿ ತಿಳಿಸಿ, ಅದರಂತೆ, ಪ್ರಸಕ್ತ ವರ್ಷದ ಲೆಕ್ಕಪರಿಶೋಧನಾ ವರದಿಗಳನ್ನು ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲು ಲೆಕ್ಕಪರಿಶೋಧನಾ ನಿರ್ದೇಶಕರು ಸರ್ಕಾರವನ್ನು ಕೋರಿರುತ್ತಾರೆ.

ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ, ಸಹಕಾರ ಸಂಘಗಳ ಹಾಗೂ ಸೌಹಾರ್ದ ಸಹಕಾರಿಗಳ 2020-21ರ ಲೆಕ್ಕಪರಿಶೋಧನಾ ಕಾರ್ಯವನ್ನು ಮುಗಿಸಿ ವರದಿಗಳನ್ನು ಸಲ್ಲಿಸುವ ಕಾಲಾವಧಿಯನ್ನು ವಿಸ್ತರಿಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಇ 45 ಸಿಎಲ್ಎಮ್ 2021 (ಇ) ಬೆಂಗಳೂರು, ದಿನಾಂಕ:23.08.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 121ರಡಿ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 70ರಡಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕ್ರಮವಾಗಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 63(1) ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 33(1) ಕ್ಕೆ ವಿನಾಯಿತಿ ನೀಡಿ, ಪ್ರತಿ ಸಹಕಾರ ವರ್ಷ ಮುಕ್ತಾಯವಾದ ನಂತರ ಮುಂಬರುವ ಸೆಪ್ಟೆಂಬರ್ ತಿಂಗಳ ಒಂದರೊಳಗಾಗಿ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು ಎಂಬುದನ್ನು ಸಡಿಲಿಸಿ, 2020-21ನೇ ಸಾಲಿನ ಲೆಕ್ಕಪರಿಶೋಧನಾ ಕಾರ್ಯವನ್ನು ಮುಗಿಸಿ ವರದಿಗಳನ್ನು ಸಲ್ಲಿಸಲು ದಿನಾಂಕ:31.10.2021ರ ವರೆಗೆ ಅವಧಿಯನ್ನು ವಿಸ್ತರಿಸಿ ಆದೇಶಿಸಿದೆ.

Scanned by CamScanner

ಮುಂದುವರೆದು, ಮೇಲಿನ ಅವಧಿ ವಿಸ್ತರಣೆಗೆ ಅನುಗುಣವಾಗಿ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 63ರ ಇತರೆ ಉಪಬಂಧಗಳು ಹಾಗೂ ಇದಕ್ಕೆ ಸಂಬಂಧಿಸಿದ ನಿಯಮಗಳು ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 33ರ ಇತರೆ ಉಪಬಂಧಗಳಲ್ಲಿನ ಅವಕಾಶಗಳಿಗೆ ಅವಧಿ ವಿಸ್ತರಿಸಲು ಲೆಕ್ಕಪರಿಶೋಧನಾ ನಿರ್ದೇಶಕರು ಸೂಕ್ತ ಆದೇಶ ಹೊರಡಿಸಲು ಕ್ರಮವಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಂ. ವೆಂಕಟಸ್ವಾಮಿ)**
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ,
ಸರ್ಕಾರದ ಜಂಟಿಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ**
ಸಂಕಲನಕಾರರು ಕರ್ನಾಟಕ ರಾಜ್ಯಪತ್ರ ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು: -**
1. ಮಹಾಲೇಖಪಾಲರು, (ಜಿ&ಎಸ್‌ಎಸ್‌ಎ), (ಇ & ಆರ್‌ಎಸ್‌ಎ), (ಎ&ಇ) ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
3. ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು
4. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠರಸ್ತೆ, ಬಸವನಗುಡಿ, ಬೆಂಗಳೂರು.
5. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
6. ಸಹಕಾರ ಸಂಘಗಳ ಜಂಟಿ ನಿಬಂಧಕರು/ಲೆಕ್ಕ ಪರಿಶೋಧನಾ ಜಂಟಿ ನಿರ್ದೇಶಕರು ಬೆಂಗಳೂರು/ ಮೈಸೂರು/ ಕಲಬುರ್ಗಿ/ಬೆಳಗಾವಿ ಪ್ರಾಂತ .
7. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರುಗಳಿಗೆ (ಸಹಕಾರ ಸಂಘಗಳ ನಿಬಂಧಕರ ಮೂಲಕ)
8. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪ ನಿರ್ದೇಶಕರುಗಳಿಗೆ (ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರ ಮೂಲಕ).
9. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು.
11. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಾಲು ಉತ್ಪಾದಕರ ಮಹಾಮಂಡಳ ನಿ., (ಕೆಎಂಎಫ್), ಬೆಂಗಳೂರು.
12. ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ., ಜೋಡಿರಸ್ತೆ, ಬೆಂಗಳೂರು-27.
13. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ನಿರ್ಮಾಣ ಭವನ, ಡಾ||ರಾಜಕುಮಾರ್ ರಸ್ತೆ, 1ನೇ ಬ್ಲಾಕ್ ರಾಜಾಜಿನಗರ, ಬೆಂಗಳೂರು-10.
14. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
15. **ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿ.**

Scanned by CamScanner